**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ ಕೆ.ರಾಥೋಡ್ ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನಾ ಸಂಖ್ಯೆ:62 ಕ್ಕೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆಗೆ ಉತ್ತರ.**

**ವಿಷಯ :** ರಾಜ್ಯ ಸರ್ಕಾರದಿಂದ ಬಡತನ ರೇಖೆಗಿಂತ ಕೆಳಗಿರುವ ಬಿ.ಪಿ.ಎಲ್ ಪಡಿತರ ಚೀಟಿ ಹೊಂದಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಗೃಹ ವಿದ್ಯುತ್ ಬಳಕೆದಾರರಿಗೆ ಭಾಗ್ಯ ಜ್ಯೋತಿ, ಕುಟೀರ ಜ್ಯೋತಿ ಒಳಗೊಂಡಂತೆ, 75 ಯೂನಿಟ್ ಮಾಸಿಕ ಉಚಿತ ವಿದ್ಯುತ್ ನೀಡುವುದಾಗಿ ಘೋಷಣೆ ಮಾಡಿದ್ದು, ಈಗ ಈ ಯೋಜನೆಯನ್ನು ಸರ್ಕಾರ ಹಿಂಪಡೆದಿರುವುದು ಕೆಲವು ಪತ್ರಿಕೆಗಳಲ್ಲಿ ವರದಿಯಾಗಿದೆ. ಇದರಿಂದ ಈ ಯೋಜನೆಯ ಫಲಾನುಭವಿಗಳಲ್ಲಿ ಅಸ್ಪಷ್ಟತೆ ಇರುವುದರ ಬಗ್ಗೆ ಮಾನ್ಯ ಇಂಧನ ಸಚಿವರಲ್ಲಿ ಗಮನ ಸೆಳೆದಿರುವ ಬಗ್ಗೆ

*****

- ರಾಜ್ಯದ ಬಡತನ ರೇಖೆಗಿಂತ ಕೆಳಗಿರುವ (ಬಿ.ಪಿ.ಎಲ್ ಪಡಿತರ ಚೀಟಿ ಹೊಂದಿರುವ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳ ಗೃಹ ವಿದ್ಯುತ್ ಬಳಕೆದಾರರಿಗೆ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಭಾಗ್ಯಜ್ಯೋತಿ / ಕುಟೀರಜ್ಯೋತಿ ಬಳಕೆದಾರರನ್ನು ಒಳಗೊಂಡಂತೆ) ಮಾಸಿಕ 75 ಯೂನಿಟ್‌ಗಳವರೆಗೆ ಉಚಿತ ವಿದ್ಯುತ್ ಒದಗಿಸುವ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರಿ ಆದೇಶ ಸಂಖ್ಯೆ:ಎನರ್ಜಿ/232/ಪಿಎಸ್‌ಆರ್/2022 ದಿನಾಂಕ:18.05.2022 ರಲ್ಲಿ ಹೊರಡಿಸಲಾಗಿರುತ್ತದೆ.
- ಈ ಯೋಜನೆಯನ್ನು ಇ-ಆಡಳಿತ ಇಲಾಖೆಯ ಸಹಯೋಗದೊಂದಿಗೆ DBT ವ್ಯವಸ್ಥೆಯಡಿ ಜಾರಿಗೊಳಿಸಲಾಗುತ್ತಿದ್ದು, ಇ-ಆಡಳಿತ ಇಲಾಖೆಯು ಸಿದ್ಧಪಡಿಸಿರುವ ತಂತ್ರಾಂಶದಲ್ಲಿ ಸದರಿ ಯೋಜನೆಯ ಫಲಾನುಭವಿಗಳನ್ನು ಗುರುತಿಸುವ ಸಂಬಂಧ ವಿದ್ಯುತ್ ಸರಬರಾಜು ಕಂಪನಿಗಳು / ಅಧಿಕಾರಿಗಳು ನಿರ್ವಹಿಸಬೇಕಾದ ಕಾರ್ಯಗಳ ಕುರಿತು ಮಾರ್ಗಸೂಚಿಗಳನ್ನು ಪಾಲಿಸಲು ಸರ್ಕಾರದ ಸುತ್ತೋಲೆ ಸಂಖ್ಯೆ: ಎನರ್ಜಿ/232/ಪಿಎಸ್‌ಆರ್/2022 ದಿನಾಂಕ:24.08.2022 ನ್ನು ಹೊರಡಿಸಿದ್ದು, ಇ-ಆಡಳಿತ ಇವರ ಸೂಚನೆಯಂತೆ ಸದರಿ ಸುತ್ತೋಲೆ (ದಿನಾಂಕ:24.08.2022ರ ಸುತ್ತೋಲೆ) ಮಾತ್ರ ದಿನಾಂಕ: 03.09.2022 ರಂದು ಹಿಂಪಡೆಯಲಾಗಿರುತ್ತದೆ.
- ಸರ್ಕಾರಿ ಆದೇಶ ಸಂಖ್ಯೆ: ಎನರ್ಜಿ/232/ಪಿಎಸ್‌ಆರ್/2022 ದಿನಾಂಕ: 18.05.2022 ರ ಆದೇಶದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಬಿ.ಪಿ.ಎಲ್ ಕುಟುಂಬದವರಿಗೆ "ಅಮೃತ ಜ್ಯೋತಿ" ಕಾರ್ಯಕ್ರಮದಡಿ ಮಾಸಿಕ 75 ಯೂನಿಟ್‌ವರೆಗೆ ಉಚಿತ ವಿದ್ಯುತ್ ಒದಗಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯನ್ನು ಹಿಂಪಡೆದಿರುವುದಿಲ್ಲ ಹಾಗೂ ಈ ಯೋಜನೆಯನ್ನು ಜರೂರಾಗಿ ಅನುಷ್ಠಾನಗೊಳಿಸುವ ಕಾರ್ಯವು ಜಾರಿಯಲ್ಲಿದ್ದು, ಪ್ರಗತಿಯ ಹಂತದಲ್ಲಿರುತ್ತದೆ.
- ಈ ಸಂಬಂಧ, ಸ್ಪಷ್ಟೀಕರಣವನ್ನು ಮಾನ್ಯ ಇಂಧನ ಸಚಿವರು ಹಾಗೂ ಇಂಧನ ಇಲಾಖೆಯಿಂದ ಸಾಮಾಜಿಕ ಜಾಲತಾಣಗಳಲ್ಲಿ (Social Media) ಮತ್ತು ದಿನಪತ್ರಿಕೆ / ಸುದ್ದಿಮಾಧ್ಯಮಗಳ ಮುಖಾಂತರ ನೀಡಲಾಗಿರುತ್ತದೆ.
- ಈ ಯೋಜನೆಯಲ್ಲಿ ಸುಮಾರು 39 ಲಕ್ಷ ಫಲಾನುಭವಿಗಳು ಇದರ ಪ್ರಯೋಜನ ಪಡೆಯಬಹುದಾಗಿದೆ ಎಂದು ಅಂದಾಜಿಸಲಾಗಿದ್ದು, ಈವರೆವಿಗೆ ಸುಮಾರು 4 ಲಕ್ಷ ಫಲಾನುಭವಿಗಳನ್ನು ಗುರುತಿಸಲಾಗಿದೆ.
- ಈ ಯೋಜನೆಯನ್ವಯ ಮೇ ಮತ್ತು ಜೂನ್ ಮಾಹೆಗಳಲ್ಲಿ ವಿದ್ಯುತ್ ಬಿಲ್ ಪಾವತಿಸಿರುವ ಸುಮಾರು 15,000 ಫಲಾನುಭವಿ ಗ್ರಾಹಕರುಗಳಿಗೆ DBT ವ್ಯವಸ್ಥೆಯಡಿ ಹಣವನ್ನು ಮರುಪಾವತಿಸಲಾಗಿರುತ್ತದೆ.

ಸಂಖ್ಯೆ: ಎನರ್ಜಿ 225 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು

C-62